# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **549** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಎಂ.ನಾಗರಾಜು, (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **08.12.2023** |
| **ಉತ್ತರಿಸುವ ಸಚಿವರು** | **ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಅತಿ ಹಿಂದುಳಿದ ಸಮಾಜವಾಗಿರುವ ಗೊಲ್ಲ ಸಮುದಾಯದ ಸ್ಥಿತಿಗತಿಗಳ ಬಗ್ಗೆ ಸರ್ಕಾರದಲ್ಲಿ ಮಾಹಿತಿ ಇದೆಯೇ | ಗೊಲ್ಲ ಸಮುದಾಯವು ಹಿಂದುಳಿದ ವರ್ಗಗಳಲ್ಲಿ ಅತೀ ಹಿಂದುಳಿದ ಸಮುದಾಯವಾಗಿದ್ದು, ಈ ಸಮುದಾಯವನ್ನು ಸರ್ಕಾರದ ಆದೇಶ ಸಂಖ್ಯೆ. ಪಿಹೆಚ್ಎಸ್ 262 ಎಸ್ಇಡಬ್ಲ್ಯೂ 65, ದಿನಾಂಕ: 01/02/1966 ರನ್ವಯ ಹಿಂದುಳಿದ ವರ್ಗಗಳ ಅಲೆಮಾರಿ/ ಅರೆಅಲೆಮಾರಿಗಳ ಸಮುದಾಯಗಳ ಪಟ್ಟಿಯಲ್ಲಿ ಸೇರ್ಪಡೆ ಮಾಡಲಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ: 30.03.2002ರಲ್ಲಿ ಗೊಲ್ಲ ಸಮುದಾಯವನ್ನು ಹಿಂದುಳಿದ ವರ್ಗಗಳ ಪಟ್ಟಿಯ ಪ್ರವರ್ಗ-1ರ ಡಿಯಲ್ಲಿ ಸೇರಿಸಿ ಶೈಕ್ಷಣಿಕ ಮತ್ತು ಉದ್ಯೋಗಕ್ಕಾಗಿ ಈ ಪ್ರವರ್ಗಕ್ಕೆ ಶೇ.4ರಷ್ಟು ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ. |
| ಆ) | ಇದ್ದಲ್ಲಿ, ಗೊಲ್ಲ ಮತ್ತು ಉಪಜಾತಿಗಳನ್ನು ಒಳಗೊಂಡಂತೆ ಈ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಸರ್ಕಾರವು ಮರು ಕುಲಶಾಸ್ತ್ರ ಅಧ್ಯಯನ ನಡೆಸಲು ಉದ್ದೇಶಿಸಿದೆಯೇ; | ಗೊಲ್ಲ ಮತ್ತು ಉಪಜಾತಿಗಳನ್ನು ಒಳಗೊಂಡಂತೆ ಈ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಸರ್ಕಾರವು ಮರು ಕುಲಶಾಸ್ತ್ರ ಅಧ್ಯ ಯನ ನಡೆಸಲು ಆದೇಶ ಹೊರಡಿಸಿರುವುದಿಲ್ಲ. |
| ಇ) | ಉದ್ದೇಶಿದ್ದಲ್ಲಿ, ಮರು ಕುಲಶಾಸ್ತ್ರ ಅಧ್ಯಯನ ನಡೆಸುವ ಯೋಜನೆ ಯಾವ ಹಂತದಲ್ಲಿದೆ ಮತ್ತು ಯಾವ ಕಾಲಮಿತಿಯೊಳಗೆ ಮರು ಕುಲಶಾಸ್ತ್ರ ಅಧ್ಯಯನ ಪೂರೈಸಿ ಗೊಲ್ಲ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ರಾಜ್ಯ ಸರ್ಕಾರದ ವತಿಯಿಂದ ಕ್ರಮ ಕೈಗೊಳ್ಳಲಾಗುವುದೇ? | |

**ಸಂಖ್ಯೆ**: ಹಿಂವಕ 296 ಬಿಸಿಎ 2023

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.